ಬೆಂಗಳೂರು ಜಲಮಂಡಳಿ ಸಚಿವರು): ಮಾನ್ಯ ಅಧ್ಯಕ್ಷರೆ, ನಮ್ಮ ಸದನದ ನಡವಳಿಕೆಗಳ ನಿಯಮ 191ರಡಿ ಸನ್ಮಾನ್ಯ ಸದಸ್ಯರು ಹಕ್ಕುಚ್ಯುತಿ ವಿಷಯವೊಂದನ್ನು ಮಂಡಿಸಿದ್ದಾರೆ. ಈ ವಿಷಯ ಲೋಕಸಭಾ ಸದಸ್ಯರಿಗೆ ಸಂಬಂಧ ಪಟ್ಟಿರುವುದರಿಂದ ನಮ್ಮ ನಿಯಮಾವಳಿಗಳ ಪ್ರಕಾರ ಲೋಕಸಭಾ ಸ್ಪೀಕರ್‌ರವರಿಗೆ ಇದನ್ನು ನೀವು ಕಳುಹಿಸಬೇಕೆಂದು ಕೇಳಿಕೊಳ್ಳುತ್ತೇನೆ.

(ಗೊಂದಲ)

ಅಧ್ಯಕ್ಷರು: ಈ ಹಕ್ಕುಚ್ಯುತಿ ಸೂಚನೆಯನ್ನು ಪರಿಶೀಲಿಸಿ, ಸೂಕ್ತ ತೀರ್ಮಾನವನ್ನು ಕೈಗೊಳ್ಳುತ್ತೇನೆ.

(ಗೊಂದಲ)

ಅಧ್ಯಕ್ಷರು: ಈಗ ವಿತ್ತೀಯ ಕಾರ್ಯಕಲಾಪಗಳು.

(ಗೊಂದಲ)

5. ವಿತ್ತೀಯ ಕಾರ್ಯಕಲಾಪಗಳು:

ಅ) 2010–11ನೇ ಸಾಲಿನ ಮಧ್ಯಮಾವಧಿ ಪರಿಶೀಲನಾ ವರದಿ ಮಂಡನೆ.

ಶ್ರೀ ಬಿ.ಎಸ್.ಯಡಿಯೂರಪ್ಪ (ಮುಖ್ಯಮಂತ್ರಿಗಳು): ಮಾನ್ಯ ಅಧ್ಯಕ್ಷರೆ, 2010–11ನೇ ಸಾಲಿನ ರಾಜ್ಯ ಹಣಕಾಸಿನ ಮಧ್ಯಮಾವಧಿ ಪರಿಶೀಲನಾ ವರದಿಯನ್ನು ಮಂಡಿಸುತ್ತಿದ್ದೇನೆ.

(ಗೊಂದಲ)

ಅಧ್ಯಕ್ಷರು: ಮಂಡಿಸಲಾಯಿತು.

(ಗೊಂದಲ)

ಅಧ್ಯಕ್ಷರು: ಈಗ 2010–11ನೇ ಸಾಲಿನ ಪೂರಕ ಅಂದಾಜುಗಳ (ಎರಡನೇ ಕಂತು) ಮೇಲೆ ಚರ್ಚೆ ಉತ್ತರ ಹಾಗೂ ಮತಕ್ಕೆ ಹಾಕುವುದು.

ಆ) 2010–11ನೇ ಸಾಲಿನ ಪೂರಕ ಅಂದಾಜುಗಳು (ಎರಡನೇ ಕಂತು)

(ಗೊಂದಲ)

ಶ್ರೀ ಬಿ.ಎಸ್.ಯಡಿಯೂರಪ್ಪ (ಮುಖ್ಯಮಂತ್ರಿಗಳು): ಮಾನ್ಯ ಅಧ್ಯಕ್ಷರೆ, ದಿನಾಂಕ:31–03–2011 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಬರುವ ಅಭಿಯಾಚನೆಗಳ ಕ್ರಮಾಂಕ 1 ರಿಂದ 5, 7ರಿಂದ 15 ಮತ್ತು 17 ರಿಂದ 28

ಇವುಗಳಿಗೆ ಸಂಬಂಧಿಸಿದಂತೆ ಸಂದಾಯವಾಗುವ ವೆಚ್ಚವನ್ನು ಭರಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ ಹಾಗೂ ಬಂಡವಾಳ ಖಾತೆಯಲ್ಲಿ ಮಂಜೂರು ಮಾಡಿದ ಮೊಬಲಗನ್ನೂ ಸೇರಿ, ಬೇಡಿಕೆಗಳ ಪಟ್ಟಿಯಲ್ಲಿ ನಮೂದಿಸಿದ ಮೊಬಲಗಿಗೆ ಮೀರಿದ ಮೊತ್ತವನ್ನು ಈ ಸಭೆಯು ಮಂಜೂರು ಮಾಡಬೇಕೆಂದು ಕೋರುತ್ತೇನೆ.

(ಗೊಂದಲ)

ಅಧ್ಯಕ್ಷರು: 2010–11ನೇ ಸಾಲಿನ ಪೂರಕ ಅಂದಾಜುಗಳು (ಎರಡನೇ ಕಂತು) ಬೇಡಿಕೆಗಳ ಪ್ರಸ್ತಾವನೆಯನ್ನು ಸಭೆಯ ಮತಕ್ಕೆ ಹಾಕುತ್ತೇನೆ.

(ಗೊಂದಲ)

ಪ್ರಸ್ತಾವ ಹೀಗಿದೆ:

ದಿನಾಂಕ: 31–03–2011ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಬರುವ ಅಭಿಯಾಚನೆಗಳ ಕ್ರಮಾಂಕ 1 ರಿಂದ 5, 7ರಿಂದ 15 ಮತ್ತು 17 ರಿಂದ 28 ಇವುಗಳಿಗೆ ಸಂಬಂಧಿಸಿದಂತೆ ಸಂದಾಯವಾಗುವ ವೆಚ್ಚವನ್ನು ಭರಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ ಹಾಗೂ ಬಂಡವಾಳ ಖಾತೆಯಲ್ಲಿ ಮಂಜೂರು ಮಾಡಿದ ಮೊಬಲಗನ್ನೂ ಸೇರಿ, ಬೇಡಿಕೆಗಳ ಪಟ್ಟಿಯಲ್ಲಿ ನಮೂದಿಸಿದ ಮೊಬಲಗಿಗೆ ಮೀರಿದ ಮೊತ್ತವನ್ನು ಈ ಸಭೆಯು ಮಂಜೂರು ಮಾಡುತ್ತದೆ.

(ಗೊಂದಲ)

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು
ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು.

(ಗೊಂದಲ)

ಪ್ರಸ್ತಾವವು"ಹೌದು"ಎನ್ನುವವರ ಪರವಾಗಿದೆ ಎಂದು ಬಾವಿಸುತ್ತೇನೆ.
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವವು ಅಂಗೀಕೃತವಾಗಿದೆ.

(ಗೊಂದಲ)

(ಮಾನ್ಯ ಅಧ್ಯಕ್ಷರ ಆದೇಶದ ಮೇರೆಗೆ ಮಂಜೂರಾದ ಬೇಡಿಕೆಗಳನ್ನು ಈ ಕೆಳಗೆ ನಮೂದಿಸಲಾಗಿದೆ)

(ಗೊಂದಲ)

1. 2011ನೇ ಮಾರ್ಚ್ 31 ರ ಅಂತ್ಯದೊಳಗಾಗಿ **'ಕೃಷಿ ಮತ್ತು ತೋಟಗಾರಿಕೆ'** ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 6369.39 ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡುವುದು.

2. 2011ನೇ ಮಾರ್ಚ್ 31ರ ಅಂತ್ಯದೊಳಗಾಗಿ **'ಪಶು ಸಂಗೋಪನೆ ಮತ್ತು ಮೀನುಗಾರಿಕೆ'** ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 11360.54 ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡುವುದು.

3. 2011ನೇ ಮಾರ್ಚ್ 31ರ ಅಂತ್ಯದೊಳಗಾಗಿ **'ಆರ್ಥಿಕ'** ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 208.00 ಲಕ್ಷ ರೂ. ಗಳಿಗೆ ಬಂಡವಾಳ ಲೆಕ್ಕದಲ್ಲಿ 350.00 ಲಕ್ಷಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡುವುದು.

4. 2011ನೇ ಮಾರ್ಚ್ 31ರ ಅಂತ್ಯದೊಳಗಾಗಿ **'ಏಆಸುಇ** ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 4009.55 ಲಕ್ಷ ರೂ. ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡುವುದು.

5. 2011ನೇ ಮಾರ್ಚ್ 31ರ ಅಂತ್ಯದೊಳಗಾಗಿ **'ಒಳಾಡಳಿತ ಮತ್ತು ಸಾರಿಗೆ'** ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿಬರುವುದರಿಂದ ರಾಜಸ್ವ ಲೆಕ್ಕದಲ್ಲಿ 8079.00 ಲಕ್ಷ ರೂ. ಗಳಿಗೆ ಮತ್ತು ಬಂಡವಾಳ ಲೆಕ್ಕದಲ್ಲಿ 500.00 ಲಕ್ಷಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡುವುದು.

6. 2011ನೇ ಮಾರ್ಚ್ 31ರ ಅಂತ್ಯದೊಳಗಾಗಿ **'ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್'** ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿಬರುವುದರಿಂದ ರಾಜಸ್ವ ಲೆಕ್ಕದಲ್ಲಿ 11965.22 ಲಕ್ಷ

ರೂ. ಗಳಿಗೆ ಮತ್ತು ಬಂಡವಾಳ ಲೆಕ್ಕದಲ್ಲಿ 22117.52 ಲಕ್ಷಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡುವುದು.

7. 2011ನೇ ಮಾರ್ಚ್ 31ರ ಅಂತ್ಯದೊಳಗಾಗಿ **'ಅರಣ್ಯ ಜೀವಿ ಶಾಸ್ತ್ರ ಮತ್ತು ಪರಿಸರ'** ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿಬರುವುದರಿಂದ ರಾಜಸ್ವ ಲೆಕ್ಕದಲ್ಲಿ 3935.00 ಲಕ್ಷ ರೂ. ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡುವುದು.

8. 2011ನೇ ಮಾರ್ಚ್ 31ರ ಅಂತ್ಯದೊಳಗಾಗಿ **'ಸಹಕಾರ'** ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 4762.21 ಲಕ್ಷ ರೂ. ಗಳಿಗೆ ಮತ್ತು ಬಂಡವಾಳ ಲೆಕ್ಕದಲ್ಲಿ 2825.00 ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡುವುದು.

9. 2011ನೇ ಮಾರ್ಚ್ 31ರ ಅಂತ್ಯದೊಳಗಾಗಿ **'ಸಮಾಜ ಕಲ್ಯಾಣ'** ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 4054.47 ಲಕ್ಷ ರೂ. ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡುವುದು.

10. 2011ನೇ ಮಾರ್ಚ್ 31ರ ಅಂತ್ಯದೊಳಗಾಗಿ **'ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ'** ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 10054.16 ಲಕ್ಷ ರೂ. ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡುವುದು.

11. 2011ನೇ ಮಾರ್ಚ್ 31ರ ಅಂತ್ಯದೊಳಗಾಗಿ **'ವಾರ್ತಾ, ಪ್ರವಾಸೋದ್ಯಮ ಮತ್ತು ಯುವಜನ ಸೇವೆಗಳು'** ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 440.19 ಲಕ್ಷ ರೂ. ಗಳಿಗೆ ಮತ್ತು ಬಂಡವಾಳ ಲೆಕ್ಕದಲ್ಲಿ 1050.50 ಲಕ್ಷಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡುವುದು.

12. 2011ನೇ ಮಾರ್ಚ್ 31ರ ಅಂತ್ಯದೊಳಗಾಗಿ **'ಆಹಾರ ಮತ್ತು ನಾಗರೀಕ ಸರಬರಾಜು'** ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 10286.20 ಲಕ್ಷ ರೂ. ಗಳಿಗೆ ಮತ್ತು ಬಂಡವಾಳ ಲೆಕ್ಕದಲ್ಲಿ 43.98 ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡುವುದು.

13. 2011ನೇ ಮಾರ್ಚ್ 31ರ ಅಂತ್ಯದೊಳಗಾಗಿ **'ಕಂದಾಯ'** ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 37473.75 ಲಕ್ಷ ರೂ. ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡುವುದು.

14. 2011ನೇ ಮಾರ್ಚ್ 31ರ ಅಂತ್ಯದೊಳಗಾಗಿ **'ಮಾಹಿತಿ ತಂತ್ರಜ್ಞಾನ'** ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 300.00 ಲಕ್ಷ ರೂ. ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡುವುದು.

15. 2011ನೇ ಮಾರ್ಚ್ 31ರ ಅಂತ್ಯದೊಳಗಾಗಿ **'ಶಿಕ್ಷಣ'** ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 47624.08 ಲಕ್ಷ ರೂ. ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡುವುದು.

16. 2011ನೇ ಮಾರ್ಚ್ 31ರ ಅಂತ್ಯದೊಳಗಾಗಿ **'ವಾಣಿಜ್ಯ ಮತ್ತು ಕೈಗಾರಿಕೆ'** ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 11043.16 ಲಕ್ಷ ರೂ. ಗಳಿಗೆ ಮತ್ತು ಬಂಡವಾಳ ಲೆಕ್ಕದಲ್ಲಿ 4797.21 ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡುವುದು.

17. 2011ನೇ ಮಾರ್ಚ್ 31ರ ಅಂತ್ಯದೊಳಗಾಗಿ **'ನಗರಾಭಿವೃದ್ಧಿ'** ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 3503.43 ಲಕ್ಷ ರೂ. ಗಳಿಗೆ ಮತ್ತು ಬಂಡವಾಳ ಲೆಕ್ಕದಲ್ಲಿ 45,000.00 ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡುವುದು.

18. 2011ನೇ ಮಾರ್ಚ್ 31ರ ಅಂತ್ಯದೊಳಗಾಗಿ **'ಲೋಕೋಪಯೋಗಿ'** ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 15000.00 ಲಕ್ಷ ರೂ. ಗಳಿಗೆ ಮತ್ತು ಬಂಡವಾಳ ಲೆಕ್ಕದಲ್ಲಿ 44311.36 ಲಕ್ಷ ರೂ. ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡುವುದು.

19. 2011ನೇ ಮಾರ್ಚ್ 31ರ ಅಂತ್ಯದೊಳಗಾಗಿ **'ಜಲಸಂಪನ್ಮೂಲ'** ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 151.44 ಲಕ್ಷ ರೂ. ಗಳಿಗೆ ಮತ್ತು ಬಂಡವಾಳ ಲೆಕ್ಕದಲ್ಲಿ 50,000.00 ಲಕ್ಷ ರೂ. ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡುವುದು.

20. 2011 ನೇ ಮಾರ್ಚ್ 31 ರ ಅಂತ್ಯದೊಳಗಾಗಿ **'ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು'** ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 1231.84 ಲಕ್ಷ ರೂ. ಗಳಿಗೆ ಮತ್ತು ಬಂಡವಾಳ ಲೆಕ್ಕದಲ್ಲಿ 3387.00 ಲಕ್ಷಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡುವುದು.

21. 2011ನೇ ಮಾರ್ಚ್ 31ರ ಅಂತ್ಯದೊಳಗಾಗಿ **'ಕಾರ್ಮಿಕ'** ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 10.00 ಲಕ್ಷ ರೂ. ಗಳಿಗೆ ಮತ್ತು ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡುವುದು.

22. 2011ನೇ ಮಾರ್ಚ್ 31ರ ಅಂತ್ಯದೊಳಗಾಗಿ **'ಇಂಧನ'** ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 70,000.00 ಲಕ್ಷ ರೂ.ಗಳಿಗೆ ಮತ್ತು ಬಂಡವಾಳ ಲೆಕ್ಕದಲ್ಲಿ 53871.00 ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡುವುದು.

23. 2011 ನೇ ಮಾರ್ಚ್ 31 ರ ಅಂತ್ಯದೊಳಗಾಗಿ **'ಕನ್ನಡ ಮತ್ತು ಸಂಸ್ಕೃತಿ'** ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 3131.16 ಲಕ್ಷ ರೂ. ಗಳಿಗೆ

ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡುವುದು.

24. 2011ನೇ ಮಾರ್ಚ್ 31ರ ಅಂತ್ಯದೊಳಗಾಗಿ **'ಯೋಜನೆ ಮತ್ತು ಸಾಂಖ್ಯಿಕ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ'** ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 1025.04 ಲಕ್ಷ ರೂ. ಗಳಿಗೆ ಮತ್ತು ಬಂಡವಾಳ ಲೆಕ್ಕದಲ್ಲಿ 10,000.00 ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡುವುದು.

25. 2011ನೇ ಮಾರ್ಚ್ 31ರ ಅಂತ್ಯದೊಳಗಾಗಿ **'ಕಾನೂನು'** ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 316.01 ಲಕ್ಷ ರೂ.ಗಳಿಗೆ ಮತ್ತು ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡುವುದು.

26. 2011ನೇ ಮಾರ್ಚ್ 31ರ ಅಂತ್ಯದೊಳಗಾಗಿ **'ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ'** ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 72.00 ಲಕ್ಷ ರೂ.ಗಳಿಗೆ ಮತ್ತು ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡುವುದು.

ಅಧ್ಯಕ್ಷರು: ಈಗ ಶಾಸನ ರಚನೆ, ಮೊದಲಿಗೆ ವಿಧೇಯಕಗಳನ್ನು ಮಂಡಿಸುವುದು. ಕರ್ನಾಟಕ ಧನ ವಿನಿಯೋಗ ವಿಧೇಯಕ, 2011

(ಗೊಂದಲ)

6. ಶಾಸನ ರಚನೆ

ಅ) ವಿಧೇಯಕಗಳನ್ನು ಮಂಡಿಸುವುದು:

1. ಕರ್ನಾಟಕ ಧನ ವಿನಿಯೋಗ ವಿಧೇಯಕ – 2011

ಶ್ರೀ ಬಿ.ಎಸ್.ಯಡಿಯೂರಪ್ಪ (ಮುಖ್ಯಮಂತ್ರಿಗಳು): ಮಾನ್ಯ ಅಧ್ಯಕ್ಷರೆ, 2011 ನೇ ಸಾಲಿನ ಕರ್ನಾಟಕ ಧನ ವಿನಿಯೋಗ ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು: ಪ್ರಸ್ತಾವನೆ ಮಂಡಿಸಲಾಯಿತು.

ಈಗ ಪ್ರಸ್ತಾವನೆಯನ್ನು ಸಭೆಯ ಮತಕ್ಕೆ ಹಾಕುತ್ತೇನೆ.